**ದಿನಾಂಕಃ 04.06.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ಹೆಚ್ಚುವರಿ ಮೆಡಿಕಲ್ ಬಿಲ್ಲುಗಳನ್ನು ನಿಪಿ **10(ಎ)** ಎಂದು ಗುರುತಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ 1ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಈ ದಿನ ಹಾಜರುಪಡಿಸಿರುವ ಬಿಲ್ಲುಗಳನ್ನು ಮೊದಲು ವಿಚಾರಣೆ ನೀಡಿದ ಸಮಯದಲ್ಲಿ ಯಾವ ಕಾರಣಕ್ಕಾಗಿ ಹಾಜರುಪಡಿಸಿಲ್ಲ ಎಂದರೆ ಸಾಕ್ಷಿಯು ಬಿಲ್ಲುಗಳು ಲಭ್ಯವಾಗದ ಕಾರಣ ಹಾಜರುಪಡಿಸಲಿಲ್ಲ ಎಂದು ನುಡಿಯುತ್ತಾರೆ. ಮೆಡಿಕಲ್ ಬಿಲ್ಲುಗಳಿಗೆ ಸಂಬಂಧಪಟ್ಟ ವೈದ್ಯರ ಸಲಹಾ ಚೀಟಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಮೆಡಿಕಲ್ ಬಿಲ್ಲುಗಳಿಗೆ ಸಂಬಂಧಪಟ್ಟ ವ್ಯಕ್ತಿಯವನ್ನು ವಿಚಾರಣೆಗೆ ಒಳಪಡಿಸಲು ತೊಂದರೆ ಇಲ್ಲ. ಬಿಲ್ಲುಗಳ ಮೊತ್ತವನ್ನು ಪಾವತಿಸಿದ ಬಗ್ಗೆ ರಶೀದಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಿಪಿ10(ಎ) ರಲ್ಲಿನ ಕ್ರಮ ಸಂಖ್ಯೆ 22 ರಿಂದ 172 ರವರೆಗಿನ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಿಪಿ 10(ಎ) ಗಳಲ್ಲಿ ಸಂಬಂಧಪಟ್ಟವರ ಸಹಿ ಮತ್ತು ಮೊಹರು ಇಲ್ಲ ಎಂದರೆ ಸಾಕ್ಷಿಯು ಆಸ್ಪತ್ರೆಯವರು ನೀಡಿದ್ದನ್ನು ಹಾಜರುಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ಮೆಡಿಕಲ್ ಬಿಲ್ಲುಗಳ ಮೊತ್ತ ಆರೋಗ್ಯ ವಿಮೆಯ ಮೂಲಕ ಮರುಪಾವತಿಯಾಗಿದೆ ಎಂದರೆ ಸರಿಯಲ್ಲ. ಮೊತ್ತ ಮರುಪಾವತಿಯಾಗದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

**<u>ಮುಂದುವರೆದ ಪಾಟೀ ಸವಾಲುಃ 2ನೇ ಎದುದಾರರ ಪರ ಮಾನ್ಯ ವಕೀಲರಿಂದ.</u>**

2ನೇ ಎದುರುದಾರರ ಪರ ಮಾನ್ಯ ವಕೀಲರು ಮುಂದುವರೆದ ಪಾಟೀ ಸವಾಲು ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**